# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 1462 |
| **ಮಾನ್ಯ ಸದಸ್ಯರ ಹೆಸರು** | : ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ** | : 20.03.2025 |
| **ಉತ್ತರಿಸುವ ಸಚಿವರು** | : ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರತ್ಯೇಕ ಚಲನಚಿತ್ರ ಪ್ರವಾಸೋದ್ಯಮ ನೀತಿಯನ್ನು ರೂಪಿಸಲು ಸರ್ಕಾರ ಯೋಚಿಸಿದೆಯೇ; ಹಾಗಿದ್ದಲ್ಲಿ, ಯಾವಾಗ ರೂಪಿಸಲಾಗುವುದು; | ಪ್ರವಾಸೋದ್ಯಮ ಇಲಾಖೆಯಿಂದ ಜಾರಿಗೆ ತರಲಾಗಿರುವ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ರಲ್ಲಿ ಕರ್ನಾಟಕ ಪ್ರವಾಸೋದ್ಯಮವು ವಾಣಿಜ್ಯ ಚಲನಚಿತ್ರಗಳು, ಪ್ರಾದೇಶಿಕ ಚಲನಚಿತ್ರಗಳು, ಸಾಕ್ಷ್ಯಚಿತ್ರಗಳು, ಟಿವಿ ನಿರ್ಮಾಣಗಳು, ಒಟಿಟಿ ನಿರ್ಮಾಣಗಳು ಮತ್ತು ಇತರ ಸಂಬಂಧಿತ ವಾಹಿನಿಗಳು / ವೇದಿಕೆಗಳಂಥ ಎಲ್ಲಾ ವಿಭಾಗಗಳ ಚಲನಚಿತ್ರ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಾಗೂ ಕರ್ನಾಟಕದಲ್ಲಿ ಚಲನಚಿತ್ರ ಪ್ರವಾಸೋದ್ಯಮದ ಸಾಮರ್ಥ್ಯವನ್ನು ಅನ್ವೇಷಿಸಲು, ಪ್ರತ್ಯೇಕ ಚಲನಚಿತ್ರ ಪ್ರವಾಸೋದ್ಯಮ ಉತ್ತೇಜನ ನೀತಿಯನ್ನು ರೂಪಿಸಲು ಯೋಜಿಸಲಾಗಿದ್ದು ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಆ) | ಕರ್ನಾಟಕ ದತ್ತ ಹೆಚ್ಚು ಪ್ರವಾಸಿಗರನ್ನು ಸೆಳೆಯಲು ಚಲನಚಿತ್ರೋತ್ಸವಗಳ ಪ್ರದರ್ಶನಗಳು ಪ್ರವಾಸೋದ್ಯಮ ಇಲಾಖೆಯಿಂದ ನಡೆದಿದೆಯೇ; ಹಾಗಿದ್ದಲ್ಲಿ, ಎಲ್ಲೆಲ್ಲಿ ನಡೆಸಲಾಗಿದೆ; | ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಚಲನಚಿತ್ರೋತ್ಸವಗಳನ್ನು ಹಮ್ಮಿಕೊಳ್ಳಲಾಗುತ್ತದೆ.<br><br>ಆದರೆ, ಕರ್ನಾಟಕದ ಪ್ರವಾಸಿ ತಾಣಗಳಿಗೆ ಹೆಚ್ಚಿನ ಪ್ರವಾಸಿಗರನ್ನು ಸೆಳೆಯಲು ರಾಜ್ಯದಲ್ಲಿ, ಹೊರರಾಜ್ಯಗಳಲ್ಲಿ ಹಾಗೂ ವಿದೇಶಗಳಲ್ಲಿ ಆಯೋಜಿಸಲಾಗುವ ಪ್ರವಾಸಿ ಮೇಳಗಳಲ್ಲಿ ಮತ್ತು ರೋಡ್-ಶೋಗಳಲ್ಲಿ ಪ್ರವಾಸೋದ್ಯಮ ಇಲಾಖೆಯು ಭಾಗವಹಿಸಿ ರಾಜ್ಯದ ಪ್ರವಾಸಿ ತಾಣಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲಾಗುತ್ತದೆ. |
| ಇ) | ಪ್ರವಾಸೋದ್ಯಮದ ವತಿಯಿಂದ 2018-2024ರವರೆಗೆ ನಿರ್ಮಾಣವಾದ ಚಲನಚಿತ್ರಗಳು ಯಾವುವು; | ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಈವರೆಗೂ ಯಾವುದೇ ಚಲನಚಿತ್ರಗಳನ್ನು ನಿರ್ಮಿಸಲಾಗಿರುವುದಿಲ್ಲ.<br><br>ಆದರೆ, ರಾಜ್ಯದ ಪ್ರವಾಸಿ ತಾಣಗಳಲ್ಲಿ ಚಿತ್ರೀಕರಣ ನಡೆಸಲು ಅವಕಾಶ / ಅನುಮತಿ ಕೋರಿ ಇಲಾಖೆಗೆ ಬರುವ ಮನವಿಗಳನ್ನು ಸಂಬಂಧಪಟ್ಟ ಪ್ರವಾಸಿ ತಾಣಗಳ ಮಾಲೀಕ ಇಲಾಖೆಗಳಿಗೆ (ಅರಣ್ಯ ಇಲಾಖೆ, ಭಾರತಿಯ ಪುರಾತತ್ವ ಇಲಾಖೆ (ASI), ತೋಟಗಾರಿಕೆ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಇತ್ಯಾದಿ) ಅಥವಾ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿಕೊಡಲಾಗುತ್ತದೆ. ಇದಲ್ಲದೇ, ಸದರಿ ಅನುಮತಿ ಪಡೆಯಲು ಇಲಾಖೆಯಿಂದ ಅಗತ್ಯವಾಗಿರುವ ಸಹಕಾರ ನೀಡಲಾಗುತ್ತದೆ.<br><br>ಮುಂದುವರೆದು, ಪ್ರವಾಸಿ ತಾಣಗಳ ಉತ್ತೇಜನಕ್ಕಾಗಿ ಪ್ರವಾಸೋದ್ಯಮ ಇಲಾಖೆಯಿಂದ "Script Your Adventure" ಎಂಬ ಕಿರುಚಿತ್ರವನ್ನು ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಿಂದ ಸದರಿ ನಿಗಮದ ಪ್ರತಿಷ್ಠಿತ ಐಶಾರಾಮಿ ಗೋಲ್ಡನ್ ಚಾರಿಯೇಟ್ ರೈಲಿನ ಬಗ್ಗೆ ಕಿರುಚಿತ್ರವನ್ನು ಮತ್ತು ಅರಣ್ಯ, ವಸತಿ ಮತ್ತು ವಿಹಾರ ಧಾಮಗಳ ಸಂಸ್ಥೆಯಿಂದ ಸದರಿ ಸಂಸ್ಥೆಯ ಘಟಕಗಳ ಬಗ್ಗೆ ಕಿರುಚಿತ್ರಗಳನ್ನು ಸಿದ್ಧಪಡಿಸಲಾಗಿರುತ್ತದೆ.<br><br>ರಾಜ್ಯದ ಪ್ರವಾಸಿ ತಾಣಗಳಿಗೆ ಹೆಚ್ಚಿನ ಪ್ರವಾಸಿಗರನ್ನು ಸೆಳೆಯಲು ಇಲಾಖೆಯಿಂದ ಕಿರುಚಿತ್ರಗಳನ್ನು ತಯಾರಿಸುವ ಬಗ್ಗೆ ಪರಿಶೀಲಿಸಬೇಕಿದೆ. |
| ಈ) | ಈ ರೀತಿಯ ಚಿತ್ರಗಳನ್ನು ನಿರ್ಮಾಣ ಮಾಡಿದರೆ ಪ್ರವಾಸಿಗರನ್ನು ಹೆಚ್ಚು ಆಕರ್ಷಿಸಲು ಅನುಕೂಲವಾಗುವುದಲ್ಲವೇ? | |

**TOR 105 TDV 2025**

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು